ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 3.12.19

# ರಾಜ್ಯಸಭೆಗೆ ರಾಮಮೂರ್ತಿ ಅವಿರೋಧ ಆಯ್ಕೆ?

## ಬಿಜೆಪಿ ಅಭ್ಯರ್ಥಿಗೆ ಈಗ ಎದುರಾಳಿಯೇ ಇಲ್ಲ | ಜಂಟಿ ಅಭ್ಯರ್ಥಿ ಕಣಕ್ಕಿಳಿಸುವ ಲೆಕ್ಕಾಚಾರದಿಂದ ಹಿಂದೆ ಸರಿದ ಕಾಂಗ್ರೆಸ್, ಜೆಡಿಎಸ್ ಇಬ್ಬರು ಸ್ವತಂತ್ರ ಅಭ್ಯರ್ಥಿಗಳ ನಾಮಪತ್ರಕ್ಕೆ ಅನುಮೋದಕರ ಸಹಿಯೇ ಇಲ್ಲ | ತಮ್ಮದೇ ಕ್ಷೇತ್ರದಲ್ಲಿ ರಾಮಮೂರ್ತಿ ಗೆಲುವು ನಿಚ್ಚಳ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಜಂಟಿ ಅಭ್ಯರ್ಥಿ ಹೂಡುವ ಚಿಂತನೆ ನಡೆಸಿದ್ದ ಕಾಂಗ್ರೆಸ್ ಹಾಗೂ ಜೆಡಿಎಸ್ ನಾಯಕರು ಅಂತಿಮ ಹಂತದಲ್ಲಿ ತಮ್ಮ ನಿಲುವಿನಿಂದ ಹಿಂದೆ ಸರಿದಿದ್ದರಿಂದ ಡಿ.12ರಂದು ವಿಧಾನಸಭೆಯಿಂದ ರಾಜ್ಯಸಭೆಯ ಸದಸ್ಯತ್ವಕ್ಕಾಗಿ ನಡೆಯುವ ಚುನಾವಣೆಯಲ್ಲಿ ಬಿಜೆಪಿಯ ಕೆ.ಸಿ.ರಾಮಮೂರ್ತಿ ಅವರು ಅವಿರೋಧ ಆಯ್ಕೆಯಾಗುವುದು ನಿಚ್ಚಳವಾಗಿದೆ.

ಈ ಚುನಾವಣೆಗೆ ನಾಮಪತ್ರ ಸಲ್ಲಿಕೆಗೆ ಅಂತಿಮ ದಿನವಾಗಿದ್ದ ಸೋಮವಾರದ ವೇಳೆಗೆ ಇಬ್ಬರು ಸ್ವತಂತ್ರ ಅಭ್ಯರ್ಥಿಗಳು ಹಾಗೂ ಬಿಜೆಪಿ ಅಭ್ಯರ್ಥಿ ಸೇರಿ ಮೂರು ಮಂದಿ ಮಾತ್ರ ನಾಮಪತ್ರ ಸಲ್ಲಿಸಿದರು.

ಈ ಪೈಕಿ ಬಿಜೆಪಿ ಅಭ್ಯರ್ಥಿ ಕೆ.ಸಿ.ರಾಮಮೂರ್ತಿ ಅವರು ಹತ್ತು ಮಂದಿ ಅನುಮೋದಕರ ಸಹಿಯೊಂದಿಗೆ ನಾಮಪತ್ರ ಸಲ್ಲಿಸಿದ್ದಾರೆ. ಆದರೆ, ಸ್ವತಂತ್ರ ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದ ವೆಂಕಟೇಶ್ವರ ಮಹಾಸ್ವಾಮಿ ಹಾಗೂ ಕೆ. ಪದ್ಮರಾಜ ಎಂಬುವವರು ನಾಮಪತ್ರ ಮಾತ್ರ ಸಲ್ಲಿಕೆ ಮಾಡಿದ್ದಾರೆ. ಇವರ ನಾಮಪತ್ರದಲ್ಲಿ ಯಾವುದೇ ಅನುಮೋದಕರ ಸಹಿ ಇಲ್ಲ. ಮಂಗಳವಾರ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಪ್ರಮುಖ ರಾಜಕೀಯ ಪಕ್ಷಗಳಾದ ಕಾಂಗ್ರೆಸ್ ಮತ್ತು ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕೆ ಹೂಡದಿರುವುದರಿಂದ ಬಿಜೆಪಿ ಅಭ್ಯರ್ಥಿ ರಾಮಮೂರ್ತಿ ಅವಿರೋಧವಾಗಿ ಆಯ್ಕೆಯಾಗುವ ಸಂಭವ ಹೆಚ್ಚಿದೆ.



## ಕಾಂಗ್ರೆಸ್, ಜೆಡಿಎಸ್ ಅಭ್ಯರ್ಥಿ ಏಕಿಲ್ಲ?

ಕಡೆ ಕ್ಷಣದವರೆಗೂ ಜಂಟಿ ಅಭ್ಯರ್ಥಿಯನ್ನು ಕಣಕ್ಕೆ ಇಳಿಸುವ ಸೂಚನೆ ನೀಡಿದ್ದ ಕಾಂಗ್ರೆಸ್ ಹಾಗೂ ಜೆಡಿಎಸ್ ನಾಯಕರು ಅಂತಿಮ ಹಂತದಲ್ಲಿ ಕಣದಿಂದ ಹಿಂದಕ್ಕೆ ಸರಿಯಲು ಕಾರಣವೇನು ಎಂಬ ಕುತೂಹಲ ಮೂಡಿದೆ. ಮೂಲಗಳ ಪ್ರಕಾರ ಜಂಟಿ ಅಭ್ಯರ್ಥಿಯನ್ನು ಕಣಕ್ಕೆ ಇಳಿಯುವ ಬಗ್ಗೆ ಕಾಂಗ್ರೆಸ್-ಜೆಡಿಎಸ್ ನಾಯಕರ ನಡುವೆ ಒಂದು ಹಂತದ ಮಾತುಕತೆ ನಡೆದಿತ್ತು. ಅದರಂತೆ ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕೆ ಇಳಿಸುವುದು ಹಾಗೂ ಅದಕ್ಕೆ ಕಾಂಗ್ರೆಸ್ ಬೆಂಬಲಿಸುವುದು ಎಂದು ನಿರ್ಧಾರವಾಗಿತ್ತು.

ಈ ತೀರ್ಮಾನದಂತೆ ನಾಮಪತ್ರ ಸಲ್ಲಿಸಲು ಅಗತ್ಯ ಅರ್ಜಿಗಳನ್ನು ಜೆಡಿಎಸ್ ಸಿದ್ಧಪಡಿಸಿತ್ತು. ಆದರೆ, ಅಂತಿಮ ಕ್ಷಣದಲ್ಲಿ ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕೆ ಇಳಿಸದೆ ಹಿಂದೆ ಸರಿದಿದೆ. ಕಾಂಗ್ರೆಸ್ ಮೂಲಗಳ ಪ್ರಕಾರ ಪಕ್ಷದ ನಾಯಕತ್ವವೂ ಈ ಬಾರಿ ಜೆಡಿಎಸ್ ಅಭ್ಯರ್ಥಿಗೆ ಬೆಂಬಲ ನೀಡಲು ನಿರ್ಧರಿಸಿತ್ತು. ಹೀಗಾಗಿ ಅಭ್ಯರ್ಥಿಯನ್ನು ಕಣಕ್ಕೆ ಇಳಿಸುವ ಹೊಣೆಯನ್ನು ಜೆಡಿಎಸ್‌ಗೆ ನೀಡಿತ್ತು. ಜೆಡಿಎಸ್ ಸಹ ಎಲ್.ಆರ್. ಶಿವರಾಮೇಗೌಡ ಸೇರಿದಂತೆ ಹಲವರನ್ನು ಸಂಪರ್ಕಿಸಿತ್ತು. ಆದರೆ, ಏಕಾಏಕಿ ಸ್ಪರ್ಧೆ ಮಾಡದಿರುವ ತೀರ್ಮಾನಕ್ಕೆ ಕೈಗೊಂಡಿದೆ ಎನ್ನಲಾಗಿದೆ. ಇದಕ್ಕೆ ಉಪ ಚುನಾವಣೆ ಫಲಿತಾಂಶಕ್ಕೆ ಮುನ್ನ ಯಾವುದೇ ಪಕ್ಷದೊಂದಿಗೆ ಗುರುತಿಸಿಕೊಳ್ಳುವುದು ಬೇಡ ಎಂಬ ನಿಲುವನ್ನು ದೇವೇಗೌಡರು ತಳೆದಿದ್ದೇ ಕಾರಣ ಎನ್ನಲಾಗುತ್ತಿದೆ.

ಬಿಜೆಪಿಯಿಂದ ಕೆ.ಸಿ.ರಾಮಮೂರ್ತಿ ಹತ್ತು ಮಂದಿ ಅನುಮೋದಕರ ಸಹಿಯೊಂದಿಗೆ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಸ್ವತಂತ್ರ ಅಭ್ಯರ್ಥಿಗಳಾಗಿ ವೆಂಕಟೇಶ್ವರ ಮಹಾಸ್ವಾಮಿ, ಕೆ. ಪದ್ಮರಾಜ ಎಂಬುವವರು ಸಲ್ಲಿಕೆ ಮಾಡಿರುವ ನಾಮಪತ್ರದಲ್ಲಿ ಅನುಮೋದಕರ ಸಹಿ ಇಲ್ಲ. ಹೀಗಾಗಿ ಮಂಗಳವಾರ ನಾಮಪತ್ರಗಳ ಪರಿಶೀಲನೆ ನಡೆಸಿ ಅಧಿಕೃತವಾಗಿ ಅಂಗೀಕೃತ ನಾಮಪತ್ರಗಳ ಸಂಖ್ಯೆ ಪ್ರಕಟಿಸಲಾಗುವುದು.

• **ಎಂ.ಕೆ. ವಿಶಾಲಾಕ್ಷಿ** ಕಾರ್ಯದರ್ಶಿ
ವಿಧಾನಸಭೆ ಸಚಿವಾಲಯ